**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.1137/2024**

**ಫಿರ್ಯಾದುದಾರರುಃ** ಶ್ರೀ ಗಿರೀಶ್ ಎಸ್., ಬಿನ್ ಟಿ.ಸೋಮಾಚಾರ್
ವಯಸ್ಸು 32 ವರ್ಷ, ವಾಸಃ ವಾರ್ಡ್ ನಂ.24,
ವಿ.ಪಿ.ಬೋರೆ, ಹುಣಸೂರು, ಮೈಸೂರು ಜಿಲ್ಲೆ

**– ವಿರುದ್ಧ –**

**ಆರೋಪಿಃ** ಶ್ರೀಮತಿ ಸರಿತಾ, ಕೋಂ ಮಹಾದೇವ ಶೆಟ್ಟಿ
38 ವರ್ಷ, ವಾಸಃ ವಾರ್ಡ್ ನಂ.24,
ವಿ.ಪಿ.ಬೋರೆ, ಹುಣಸೂರು, ಮೈಸೂರು ಜಿಲ್ಲೆ

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 351 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಗಿರೀಶ್ ಎಸ್ ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯೂ.1 ಗೀರೀಶ ಎಸ್ ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಯಸ್ಥರಾಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಪರಿಚಯ ಇದೆ |
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ನಿಮ್ಮ ಹೋಲ್ ಸೇಲ್ ತರಕಾರಿ ವ್ಯಾಪಾರದ ಅಭಿವೃದ್ಧಿಗಾಗಿ ಅವರಿಂದ ರೂ.2,00,000/-ಗಳನ್ನು ಮೂರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ದಿನಾಂಕ 21.07.2024 ರಂದು ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ:4 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ತೀರುವಳಿಗಾಗಿ 21.10.2024ರ ದಿನಾಂಕ ನಮೂದಿಸಿ ಇಂಡಿಯನ್ ಓವರ್ ಸೀಸ್ ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ಸಂಃ 940058 ಅನ್ನು ರೂ.2,00,000/- ಗಳಿಗೆ ಫಿರ್ಯಾದುದಾರರಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ |
| ಉತ್ತರ: | ಚೀಟಿ ವ್ಯವಹಾರದ ಭದ್ರತೆಗಾಗಿ ಪಡೆದುಕೊಂಡಿದ್ದಾರೆ |
| ಪ್ರಶ್ನೆ5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಕರ್ನಾಟಕ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 29.10.2024 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹಣ ಇಲ್ಲದೇ ಇದ್ದರೂ ಪರವಾಗಿಲ್ಲ ಎಂದು ಹೇಳಿ ಭದ್ರತೆಗಾಗಿ ಪಡೆದುಕೊಂಡಿದ್ದೇನೆ |
| ಪ್ರಶ್ನೆ6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 30.10.2024 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ನೋಟೀಸು ನಿಮಗೆ ದಿನಾಂಕ 04.11.2024 ರಂದು ಜಾರಿಯಾಗಿರುತ್ತದೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಜಾರಿಯಾಗಿದೆ |
| ಪ್ರಶ್ನೆ8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ |

| | |
|---|---|
| | ನೆಗೋಶಿಯೇಬಲ್ ಇನ್ಸ್ಟ್ರುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ ಮತ್ತು ಅಂಚೆ ಸ್ವೀಕೃತಿ ಪತ್ರ ವನ್ನು ನಿಪಿ-1 ರಿಂದ ನಿಪಿ-5 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 10: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇದೆ |
| ಪ್ರಶ್ನೆ 11: | ನಿಮ್ಮ ಪರವಾಗಿ ಸಾಕ್ಷ ವಿಚಾರಣೆ ಇದೆಯೇ? |
| ಉತ್ತರ: | ಇದೆ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 04.02.2026.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ